## ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 491 ಗ್ರಾಪಂಅ 2019

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:28-05-2019

## ಸುತ್ತೋಲೆ

ವಿಷಯ:- ಗ್ರಾಮ ಪಂಚಾಯತಿಗಳು ತೆರಿಗೆ ನಿರ್ಧರಣೆ, ಪರಿಷ್ಕರಣೆ ಮತ್ತು ವಸೂಲಾತಿ ಪ್ರಕ್ರಿಯೆ ತ್ವರಿತಗೊಳಿಸುವ ಬಗ್ಗೆ.

ಉಲ್ಲೇಖ:
1) ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ, 1993ರ ಪ್ರಕರಣ 199, 199ಎ ಮತ್ತು 200.
2) ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತ್ ತೆರಿಗೆಗಳು ಮತ್ತು ಫೀಜುಗಳು) ನಿಯಮಗಳು, 1994.
3) ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 939 ಗ್ರಾಪಂಅ 2016 (ಭಾಗ-1), ದಿನಾಂಕ 19.11.2016.
4) ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 481 ಗ್ರಾಪಂಅ 2016, ದಿನಾಂಕ 27.02.2018
5) ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 341 ಗ್ರಾಪಂಅ 2017, ದಿನಾಂಕ 13.04.2017
6) ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 513 ಗ್ರಾಪಂಅ 2017, ದಿನಾಂಕ 22.07.2017.
7) ಸರ್ಕಾರದ ಪತ್ರ ಸಂಖ್ಯೆ:ಗ್ರಾಅಪ 740 ಗ್ರಾಪಂಅ 2018 ದಿನಾಂಕ:21-07-2018.

***

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ, 1993ರನ್ವಯ ಗ್ರಾಮ ಪಂಚಾಯತಿಗಳು ತಮ್ಮ ವ್ಯಾಪ್ತಿಯಲ್ಲಿ ಬರುವ ಕೃಷಿಯೇತರ ಆಸ್ತಿಗಳ ಮೇಲೆ ತೆರಿಗೆ ವಿಧಿಸಲು ಅವಕಾಶ ಕಲ್ಪಿಸಲಾಗಿದೆ. ಅನುಸೂಚಿ-IV ರಲ್ಲಿ ಗ್ರಾಮ ಪಂಚಾಯತಿಗಳು ವಿಧಿಸಬಹುದಾದ ತೆರಿಗೆಗಳ ಬಗ್ಗೆ ವಿವರಗಳನ್ನು ನೀಡಲಾಗಿದೆ. ತೆರಿಗೆ ನಿರ್ಧರಣೆ, ಪರಿಷ್ಕರಣೆ ಹಾಗೂ ವಸೂಲಾತಿ ಬಗ್ಗೆ ಉಲ್ಲೇಖಿತ ನಿಯಮಗಳು/ಸುತ್ತೋಲೆಗಳಲ್ಲಿ ವಿಸ್ತೃತವಾದ ಮಾರ್ಗಸೂಚಿಗಳನ್ನು ನೀಡಲಾಗಿದೆ.

ಗ್ರಾಮ ಪಂಚಾಯತಿಗಳು ತಮ್ಮ ಸ್ವಂತ ಸಂಪನ್ಮೂಲಗಳನ್ನು ಕ್ರೋಢೀಕರಿಸಿಕೊಂಡು ಆರ್ಥಿಕವಾಗಿ ಸ್ವಾವಲಂಬಿಗಳಾಗಿ ಹೆಚ್ಚಿನ ಪ್ರಮಾಣದಲ್ಲಿ ಜನರಿಗೆ ಅವಶ್ಯವಿರುವ ಸೇವೆಗಳನ್ನು ಒದಗಿಸಬೇಕೆಂಬುದು ಸರ್ಕಾರದ ಆಶಯವಾಗಿದೆ. ಆದರೆ, ಹೆಚ್ಚಿನ ಗ್ರಾಮ ಪಂಚಾಯತಿಗಳು ತಮಗೆ ನೀಡಲಾದ ಅಧಿಕಾರವನ್ನು ಸಮರ್ಪಕವಾಗಿ ಬಳಸಿಕೊಳ್ಳದೆ ತೆರಿಗೆ ನಿರ್ಧರಣೆ, ಪರಿಷ್ಕರಣೆ ಹಾಗೂ ವಸೂಲಾತಿಯಲ್ಲಿ ನಿರ್ಲಕ್ಷ್ಯ ವಹಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಗ್ರಾಮ ಪಂಚಾಯತಿಗಳ ತೆರಿಗೆ ನಿರ್ಧರಣೆ, ಪರಿಷ್ಕರಣೆ ಹಾಗೂ ವಸೂಲಾತಿ ಪ್ರಕ್ರಿಯೆ ಸಮರ್ಪಕವಾಗಿ ಕೈಗೊಳ್ಳುವ ಬಗ್ಗೆ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳ ಪಾತ್ರವನ್ನು ನಿರ್ದಿಷ್ಟಪಡಿಸಲಾಗಿದೆ. ಜಿಲ್ಲಾ ಮಟ್ಟದಲ್ಲಿ ತೆರಿಗೆ ನಿರ್ಧರಣೆ/ಪರಿಷ್ಕರಣೆ ಬಗ್ಗೆ ಗ್ರಾಮ ಪಂಚಾಯತಿಗಳಿಗೆ ಸೂಕ್ತ ಮಾರ್ಗದರ್ಶನ ನೀಡಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ಉಲ್ಲೇಖ (3) ರಂತೆ ರಚಿಸಲಾಗಿದೆ. ತಾಲ್ಲೂಕು

ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳು ಗ್ರಾಮ ಪಂಚಾಯತಿಗಳ ತೆರಿಗೆ ವಸೂಲಾತಿ ಪ್ರಕ್ರಿಯೆಯನ್ನು ನಿರಂತರವಾಗಿ ಮೇಲ್ವಿಚಾರಣೆ ಮಾಡಲು ತಿಳಿಸಲಾಗಿದೆ. ಆದಾಗ್ಯೂ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಕಾರ್ಯನಿರ್ವಾಹಕ ಅಧಿಕಾರಿಗಳು ತಮಗೆ ವಹಿಸಲಾದ ಜವಾಬ್ದಾರಿಗಳನ್ನು ಸಮರ್ಪಕವಾಗಿ ನಿರ್ವಹಿಸದಿರುವುದು ಗ್ರಾಮ ಪಂಚಾಯತಿಗಳ ತೆರಿಗೆ ವಸೂಲಾತಿಯಲ್ಲಿನ ಹಿನ್ನೆಡೆಗೆ ಕಾರಣರೆಂದು ಸರ್ಕಾರವು ಭಾವಿಸಿದೆ. ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ರಾಜ್ಯ ಮಟ್ಟದ ಸಭೆಯಲ್ಲಿ ಮಾನ್ಯ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಸಚಿವರು ತೆರಿಗೆ ಸಂಗ್ರಹದ ಮಹತ್ವದ ಬಗ್ಗೆ ಮನವರಿಕೆ ಮಾಡಿರುತ್ತಾರೆ.

ಈ ಹಿನ್ನೆಲೆಯಲ್ಲಿ, ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತಮ್ಮ ವ್ಯಾಪ್ತಿಯ ಗ್ರಾಮ ಪಂಚಾಯಿತಿಗಳ ತೆರಿಗೆ ನಿರ್ಧರಣೆ, ಪರಿಷ್ಕರಣೆ ಹಾಗೂ ವಸೂಲಾತಿಗೆ ಸಂಬಂಧಿಸಿದಂತೆ ವೈಯಕ್ತಿಕ ಗಮನಹರಿಸಿ ಎಲ್ಲಾ ಗ್ರಾಮ ಪಂಚಾಯಿತಿಗಳು ಕಾಯ್ದೆ ಅನುಸಾರ ತೆರಿಗೆ ನಿರ್ಧರಣೆ, ಪರಿಷ್ಕರಣೆ ಮತ್ತು ವಸೂಲಾತಿ ಮಾಡಲು ಅವಶ್ಯ ಕ್ರಮಗಳನ್ನು ಕೈಗೊಳ್ಳಬೇಕಾಗಿ ತಿಳಿಸಿದೆ. ಈ ಸಂಬಂಧ ಪ್ರತಿ ಮಾಹೆ ಕಡ್ಡಾಯವಾಗಿ ಪ್ರಗತಿ ಪರಿಶೀಲನೆ ನಡೆಸಿ ಸರ್ಕಾರಕ್ಕೆ ವರದಿ ಮಾಡಲು ತಿಳಿಸಿದೆ.

(ಉಮಾ ಮಹದೇವನ್)
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

1) ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು.
2) ಕಾರ್ಯನಿರ್ವಾಹಕ ಅಧಿಕಾರಿಗಳು, ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳು.
3) ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳು.

**ಪ್ರತಿಯನ್ನು ಮಾಹಿತಿಗಾಗಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿ.
3) ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
4) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.

ಹೊರಡಿಸಿದೆ
ದಿನಾಂಕ